# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | :: | **2077** |
| **ಸದಸ್ಯರ ಹೆಸರು** | :: | **ಡಾ\|\| ಚಂದ್ರಶೇಖರ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)** |
| **ಉತ್ತರಿಸುವ ದಿನಾಂಕ** | :: | **24.03.2021** |
| **ಉತ್ತರಿಸುವ ಸಚಿವರು** | :: | **ಪಶುಸಂಗೋಪನೆ ಸಚಿವರು** |

| **ಕ್ರ.ಸಂ** | **ಪ್ರಶ್ನೆಗಳು** | **ಉತ್ತರಗಳು** |
|---|---|---|
| ಅ) | ಬೀದರ್ ಜಿಲ್ಲೆಯ ಪಶುಸಂಗೋಪನೆ ಇಲಾಖೆಯಲ್ಲಿರುವ ಗ್ರೂಪ್-ಡಿ ಹುದ್ದೆಗಳನ್ನು ಸರ್ಕಾರವು ನೇಮಕ ಮಾಡುವುದು ಯಾವಾಗ; | ಸರ್ಕಾರದ ಸುತ್ತೋಲೆ ಸಂಖ್ಯೆ ಸಿ.ಆ.ಸು.ಇ 137 ಈಕಾಅ 2005 ದಿನಾಂಕ:26-07-2005 ರನ್ವಯ 'ಡಿ' ದರ್ಜೆ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಪೂರೈಸಲು ಸೂಚಿಸಿರುವ ಹಿನ್ನಲೆಯಲ್ಲಿ, ಇಲಾಖೆಗೆ ಹೊರಗುತ್ತಿಗೆ ಸೇವೆಯನ್ನು ಪಡೆಯಲಾಗಿದ್ದು, ಅದರಂತೆ ಬೀದರ್ ಜಿಲ್ಲೆಯಲ್ಲಿ 79 'ಡಿ' ದರ್ಜೆ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿಮಾಡಲಾಗಿದೆ. |
| ಆ) | ಇಲ್ಲಿ ಗ್ರೂಪ್-ಡಿ ಹುದ್ದೆಯ ನೌಕರರಿಲ್ಲದೆ ಕಛೇರಿ ಕಾರ್ಯ ನಿರ್ವಹಣೆಯಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದ್ದು, ಜಿಲ್ಲೆಯಲ್ಲಿ 150 'ಡಿ' ದರ್ಜೆ ಖಾಲಿ ಇದ್ದು ಈ ಖಾಲಿ ಹುದ್ದೆಗಳಿಗೆದುರಾಗಿ 79 'ಡಿ' ದರ್ಜೆ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಪಡೆಯಲಾಗಿದೆ. |
| ಇ) | ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿಯಿರುವ ಪಶುವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು; ಅವುಗಳ ನೇಮಕಾತಿ ಭರ್ತಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಕಲ್ಯಾಣ-ಕರ್ನಾಟಕ ಭಾಗದಲ್ಲಿ 61 ಪಶುವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇದೆ.<br><br>ಕಲ್ಯಾಣ–ಕರ್ನಾಟಕ 371(ಜೆ) ಪ್ರದೇಶದ ಸ್ಥಳೀಯ ವೃಂದಕ್ಕೆ ಮೀಸಲಿರಿಸಿದ 61 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿ ಅಧಿಸೂಚನೆ ಹೊರಡಿಸಲಾಗಿದ್ದು, ದಿನಾಂಕ: 24.02.2021ರ ಆರ್ಥಿಕ ಇಲಾಖೆಯ ಸಹಮತಿಯನ್ವಯ ನೇಮಕಾತಿ ಪೂರ್ವ ಪ್ರಕ್ರಿಯೆಗಳನ್ನು ಪ್ರಾರಂಭಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಪಸಂಮೀ ಇ-59 ಪಲಸೇ 2021

**(ಪ್ರಭು ಬಿ. ಚವ್ಹಾಣ್)**
ಪಶುಸಂಗೋಪನೆ ಸಚಿವರು